ಆ) ಈ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಹೆಚ್ಚುವರಿ ಹಣ ಬಿಡುಗಡೆ ಮಾಡಲಾಗಿದೆಯೇ?

ಇ) ಹಾಗಿದ್ದಲ್ಲಿ ಯಾವಾಗ ಕಾಮಗಾರಿ ಪೂರ್ಣಗೊಳಿಸಲಾಗುವುದು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಮತ್ತು ಇ) ದೇವನಹಳ್ಳಿಯಲ್ಲಿ ಈ ಹಿಂದೆ ಒಂದು ಮಿನಿ ಅಂಬೇಡ್ಕರ್ ಭವನ ನಿರ್ಮಿಸಲಾಗಿತ್ತು. ಈ ಭವನದ ಪಕ್ಕದಲ್ಲಿ ಖಾಲಿ ಇರುವ ಸ್ಥಳದಲ್ಲಿ ಇನ್ನೊಂದು ಅಂಬೇಡ್ಕರ್ ಭವನ ನಿರ್ಮಿಸಲು 2006–07ನೇ ಸಾಲಿನಲ್ಲಿ ರೂ.76.50 ಲಕ್ಷಗಳ ಮೊತ್ತದ ಅಂದಾಜುಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ರೂ.15.00 ಲಕ್ಷಗಳನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿರುತ್ತದೆ. ಆದರೆ ಕಟ್ಟಡ ಕಾಮಗಾರಿಗಳು ಇನ್ನೂ ಪ್ರಾರಂಭವಾಗಿರುವುದಿಲ್ಲ.

ಸಮುದಾಯ ಭವನ ನಿರ್ಮಾಣ

479 (375) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಹೋಬಳಿ ಗ್ರಾಮಗಳಲ್ಲಿ ಸಮುದಾಯ ಭವನ ನಿರ್ಮಾಣ ಮಾಡಲಾಗುವುದು (ವಿವರಗಳನ್ನು ತಿಳಿಸುವುದು);

ಆ) ಹಾಗಿದ್ದಲ್ಲಿ, ಆ ಗ್ರಾಮಗಳು ಯಾವುವು;

ಇ) ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು, ಇದಕ್ಕೆ ತಗಲುವ ಅನುದಾನ ಎಷ್ಟು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) 209–10ನೇ ಸಾಲಿನಲ್ಲಿ ದೇವನಹಳ್ಳಿ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ವಿಜಯಪುರ ಹೋಬಳಿಯಲ್ಲಿ ಒಂದು ಸಮುದಾಯ ಭವನ ಮಂಜೂರು ಮಾಡಲಾಗಿದೆ.

ಆ) ವಿಜಯಪುರ ಗ್ರಾಮ, ವಿಜಯಪುರ ಹೋಬಳಿ, ದೇವನಹಳ್ಳಿ ತಾಲ್ಲೂಕು.

ಇ) ರೂ.5.00 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ ಕಾಮಗಾರಿಯನ್ನು ಸಧ್ಯದಲ್ಲೆ ಪ್ರಾರಂಭ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಸಾರಿಗೆ ಘಟಕದ ಸ್ಥಾಪನೆ

480 (377) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇವನಹಳ್ಳಿ ತಾಲ್ಲೂಕಿನಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಘಟಕ ಸ್ಥಾಪನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದರೆ, ಕಾಮಗಾರಿಯನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು; ಇದರ ಅಂದಾಜು ಅನುದಾನದ ಮೊತ್ತ ಎಷ್ಟು?

ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು) :

ಅ) ಹೌದು.

ಆ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವತಿಯಿಂದ ಘಟಕ ನಿರ್ಮಿಸಲು ನಿವೇಶನವನ್ನು ಗುರುತಿಸಿದ್ದು, ಕಂದಾಯ ಇಲಾಖಾ ವತಿಯಿಂದ ಹಸ್ತಾಂತರಿಸಿದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು. ಸದರಿ ಯೋಜನೆಗೆ ಆಯವ್ಯಯದಲ್ಲಿ 300.00 ಲಕ್ಷ ರೂ.ಗಳನ್ನು ಅಳವಡಿಸಲಾಗಿದೆ.